ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 1324 ಗ್ರಾಪಂಅ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:10-01-2018

## ಸುತ್ತೋಲೆ

ವಿಷಯ: ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ನಾಯಿಗಳನ್ನು ಸಂರಕ್ಷಿಸುವ ಬಗ್ಗೆ.

****

ರಾಜ್ಯದ ಕೆಲವು ಗ್ರಾಮ ಪಂಚಾಯತಿಗಳಲ್ಲಿ ನಾಯಿಗಳನ್ನು ಕೊಲ್ಲಲು ಗ್ರಾಮ ಪಂಚಾಯತಿಗಳು ನಿರ್ಣಯ ತೆಗೆದುಕೊಂಡಿದ್ದು, ಈ ಸಂಬಂಧ ಪೋಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ವಿಶ್ವ ಆರೋಗ್ಯ ಸಂಘಟನೆಯಿಂದ ಪ್ರಾಣಿಗಳ ಜನನ ನಿಯಂತ್ರಣ ಕಾರ್ಯಕ್ರಮದ ರೀತ್ಯಾ ಕೇಂದ್ರ ಸರ್ಕಾರದಿಂದ ರೂಪಿಸಲಾದ The Animal Birth Control (Dogs) Rules 2001 ರ ರೀತ್ಯಾ ಪ್ರಾಣಿಗಳನ್ನು ಕೊಲ್ಲುವುದರ ಬದಲು ಪ್ರಾಣಿಗಳನ್ನು ಬಂಜೆ ಮಾಡಲು ಹಾಗೂ ಪ್ರತಿ ರಕ್ಷಣೆ ಮಾಡಲು ಕ್ರಮ ವಹಿಸಬಹುದಾಗಿರುತ್ತದೆ. The Prevention of Cruelty to Animals Act 1960 ರ ರೀತ್ಯಾ ಪ್ರಾಣಿಗಳನ್ನು ಕೊಲ್ಲುವುದಕ್ಕೆ ಅಥವಾ ಪ್ರಾಣಿ ಸಂಕುಲವನ್ನು ನಾಶಪಡಿಸುವವರಿಗೆ ದಂಡ ವಿಧಿಸಲು ಅವಕಾಶ ಕಲ್ಪಿಸಲಾಗಿದೆ.

ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ನಾಯಿಗಳನ್ನು ಕೊಲ್ಲುವುದರ ಬದಲು ನಾಯಿಗಳನ್ನು ಬಂಜೆ ಮಾಡಲು ಹಾಗೂ ಪ್ರತಿ ರಕ್ಷಣೆ ಮಾಡಲು ಕ್ರಮ ವಹಿಸುವಂತೆ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಸೂಚಿಸಿದೆ.

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

ಪ್ರತಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿರವರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿರವರು.
3) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
4) ಕಾರ್ಯಾಧ್ಯಕ್ಷರು, ಕರ್ನಾಟಕ ಪಂಚಾಯತ್ ಪರಿಷತ್, ನಂ.186/6, ಶಿರೂರು ಪಾರ್ಕ್ ರಸ್ತೆ, ನಟರಾಜ ಟಾಕೀಸ್ ಎದುರು, ಶೇಷಾದ್ರಿಪುರಂ, ಬೆಂಗಳೂರು-560020.
5) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.